ಕೈಗಾರಿಕೆಗಳೊಂದಿಗೆ ಒಡಂಬಡಿಕೆ (ಟಯಪ್) ವ್ಯವಸ್ಥೆ ಇಲ್ಲದ ಕಾರಣ ಕೋರ್ಸುಗಳನ್ನು ಮುಚ್ಚಿ ಪರ್ಯಾಯ ವ್ಯವಸ್ಥೆ ಕಲ್ಪಿಸಲು ನಿರ್ಧರಿಸಿದೆ.

ಇ) ಶಿಕ್ಷಕರ ವರ್ಗಾವಣೆ ಮಾಡುವಾಗ ಅನುಸರಿಸುತ್ತಿರುವ ಕಾಲಮಿತಿ 5 ವರ್ಷ.

ಈ) ಹೌದು

ಕಳ್ಳಬಟ್ಟಿ ದುರಂತ ಕುರಿತು.

32(117) ಶ್ರೀ ಮಂಜು ಎ:(ಅರಕಲಗೂಡು) ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2009–10ನೇ ಸಾಲಿನಲ್ಲಿ ಕಳ್ಳಭಟ್ಟಿ ದುರಂತದಿಂದಾಗಿ ಸಾವನ್ನಪ್ಪಿದವರ ಸಂಖ್ಯೆ ಎಷ್ಟು:

ಆ) ಈ ದುರಂತಕ್ಕೆ ತುತ್ತಾದವರಿಗೆ ಸರ್ಕಾರದಿಂದ ಎಷ್ಟು ಪರಿಹಾರ ನೀಡಲಾಗಿರುತ್ತದೆ. (ತಾಲ್ಲೂಕುವಾರು ಪೂರ್ಣ ವಿವರವನ್ನು ನೀಡುವುದು)

ಶ್ರೀ ಎಂ ಪಿ ರೇಣುಕಾಚಾರ್ಯ(ಮಾನ್ಯ ಅಬಕಾರಿ ಸಚಿವರು):

ಅ) 2009–10 ನೇ ಅಬಕಾರಿ ಸಾಲಿನಲ್ಲಿ ಶಂಕಿತ ಕಳ್ಳಭಟ್ಟಿ/ನಕಲಿ ಮದ್ಯ ಸೇವನೆಯಿಂದ ಒಟ್ಟು 11 ಜನರು ಮೃತಪಟ್ಟಿರುವ ಘಟನೆ ಗಮನಕ್ಕೆ ಬಂದಿರುತ್ತದೆ.

ಆ) ನಕಲಿ ಮದ್ಯ/ಕಳ್ಳಬಟ್ಟಿ ಸಾರಾಯಿ ಸೇವನೆಯಿಂದ ನಿಧನ ಹೊಂದಿದವರಿಗೆ ಯಾವುದೇ ಪರಿಹಾರ ನೀಡಿರುವುದಿಲ್ಲ.

ಉಪನ್ಯಾಸಕರ ಮತ್ತು ಶಿಕ್ಷಕರ ಕೊರತೆ

33(246) ಶ್ರೀ ಅಶ್ವಥ ಎಂ ಸಿ:(ಚೆನ್ನಪಟ್ಟಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಚನ್ನಪಟ್ಟಣ, ಈ ಕ್ಷೇತ್ರದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಶಿಕ್ಷಕರ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ. ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಉ) ಮೇಲ್ಕಂಡ ಎಲ್ಲಾ ಹುದ್ದೆಗಳನ್ನು ತುಂಬಲು ಸರ್ಕಾರಕ್ಕಿರುವ ತೊಂದರೆಗಳೇನು?

ಊ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ?

ಋ) ಹಾಗಿದ್ದಲ್ಲಿ, ಎಂದಿನಿಂದ ತುಂಬಲಾಗುವುದು(ವಿವರಗಳನ್ನು ನೀಡುವುದು)?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಚನ್ನಪಟ್ಟಣ ತಾಲ್ಲೂಕಿನಲ್ಲಿ 7 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇದ್ದು, ಈ ಕಾಲೇಜುಗಳಲ್ಲಿ ಒಟ್ಟು 8 ಉಪನ್ಯಾಸಕರುಗಳ ಹುದ್ದೆಗಳು ಖಾಲಿ ಇವೆ.

ಆ) ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. ಬಡ್ತಿ ಕೋಟಾದ ಹುದ್ದೆಗಳನ್ನು ತುಂಬಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. ನೇರ ನೇಮಕಾತಿ ಮತ್ತು ಬಡ್ತಿ ಮೂಲಕ ಹುದ್ದೆಗಳನ್ನು ತುಂಬುವವರೆಗೆ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಲು ಕ್ರಮ ಕೈಗೊಂಡಿದೆ.

ಇ) ಹೌದು. ಪ್ರಾಥಮಿಕ ಶಾಲಾ ಶಿಕ್ಷಕರ 7 ಹುದ್ದೆಗಳು ಮತ್ತು ಪ್ರೌಢಶಾಲಾ ಶಿಕ್ಷಕರ 28 ಹುದ್ದೆಗಳು ಖಾಲಿ ಇವೆ.

ಈ) ಪ್ರೌಢಶಾಲಾ ಶಿಕ್ಷಕರ ನೇರ ನೇಮಕಾತಿಗೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದ್ದು, ಕೌನ್ಸಲಿಂಗ್ ಮೂಲಕ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಇದಲ್ಲದೇ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ನಡೆಯುತ್ತಿದ್ದು, ಈ ಹುದ್ದೆಗಳನ್ನು ತುಂಬಲಾಗುವುದು.

ಹಾಗೂ ಅಗತ್ಯವಿದ್ದಲ್ಲಿ ಅತಿಥಿ ಶಿಕ್ಷಕರನ್ನು ನೇಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಊ) ಯಾವುದೇ ತೊಂದರೆ ಇಲ್ಲ.

ಋ) ಇಲ್ಲ

ೠ) ಉಪಪ್ರಶ್ನೆ "ಈ" ಗೆ ನೀಡಿರುವ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಕುಡಿಯುವ ನೀರಿನ ಯೋಜನೆ

34(254) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಬಾರ್ಡ್‌ನ ವಿಶ್ವಬ್ಯಾಂಕ್ ನೆರವಿನೊಂದಿಗೆ ಕೊಪ್ಪಳ ತಾಲ್ಲೂಕಿನ 16 ಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆ ಮಂಜೂರಾತಿ ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯು ಸಮರ್ಪಕವಾಗಿ ಕಾರ್ಯನಿರ್ವಹಿಸದೆ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಯೋಜನೆಗೆ ತಾಂತ್ರಿಕ ತೊಂದರೆಗಳೇನು

ಇ) ಹಾಗಿದ್ದಲ್ಲಿ. ತೊಂದರೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡು ಕ್ರಮಗಳೇನು?

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ

ಆ) ಈ ಯೋಜನೆಯಡಿ ಸೇರ್ಪಡೆಯಾದ ಒಟ್ಟು 16 ಗ್ರಾಮಗಳ ಪೈಕಿ 10 ಗ್ರಾಮಗಳಿಗೆ ನೀರು ಪೂರೈಸಿ, ನಿರ್ವಹಣೆಗಾಗಿ ಸಂಬಂಧಪಟ್ಟ ನೀರು ಸರಬರಾಜು ಸಮಿತಿಗಳಿಗೆ ಹಸ್ತಾಂತರಿಸಲಾಗಿದೆ. ಬಾಕಿ ಉಳಿದ 6 ಗ್ರಾಮಗಳಿಗೆ ಪೈಪುಗಳ ಮೂಲಕ ನೀರು ಹರಿಬಿಟ್ಟು, ಪರೀಕ್ಷೆ ಮಾಡಲು ತುಂಗಭದ್ರ ನದಿಯಲ್ಲಿ ನೀರು ಕಡಿಮೆ ಇದ್ದುರಿಂದ ಹಾಗೂ ಎಕ್ಸಪ್ರೆಸ್ ಫೀಡರ್ ಲೈನ್ ಇಲ್ಲದೇ